## ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:**
1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 163 ಎಂಡಿಎಸ್ 2015 ದಿನಾಂಕ: 06.04.2017.
2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 25.04.2017, 22.08.2017 ಮತ್ತು 13.10.2017.

*******

**ಪ್ರ ಸ್ತಾ ವ ನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾಸಿರಿ ಯೋಜನೆಯನ್ನು ಉಲ್ಲೇಕ(1)ರಲ್ಲಿ ಹೊರಡಿಸಿರುವ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಜಾರಿಗೊಳಿಸಲಾಗುತ್ತಿದೆ.

ಮುಂದುವರೆದು, ಉಲ್ಲೇಖ(2)ರ ಆದೇಶದಲ್ಲಿ 2017-18ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ಆಯವ್ಯಯದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಅದರಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಗೆ ಮೊದಲನೇ, ಎರಡನೇ ಮತ್ತು ಮೂರನೇ ಕಂತಿನ ಅನುದಾನವಾಗಿ ರೂ. 1125.00 ಲಕ್ಷಗಳನ್ನು ನಿರ್ದೇಶಕರು, ಅಲ್ಪಸಂಖ್ಯತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದ ಪೈಕಿ ರೂ. 1125.00 ಲಕ್ಷ (ರೂ ಹನ್ನೊಂದು ಕೋಟಿ ಇಪ್ಪತ್ತೈದು ಲಕ್ಷಗಳು)ಗಳನ್ನು ವಿದ್ಯಾಸಿರಿ ಕಾರ್ಯಕ್ರಮವನ್ನು ಜಾರಿಗೊಳಿಸಲು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

### ಆ ದೇ ಶ

**ಸಂಖ್ಯೆ: ಅಸಂನಿ/ವಿ.ಸಿ/ಸಿಆರ್-1/2017-18/** **ದಿನಾಂಕ: 31/10/2017**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯನ್ನು 2017-18ನೇ ಸಾಲಿನಲ್ಲಿ ಜಾರಿಗೊಳಿಸಲು ಸದರಿ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮೊದಲನೇ, ಎರಡನೇ ಮತ್ತು ಮೂರನೇ ಕಂತಿನ ಅನುದಾನ ರೂ. 1125.00 ಲಕ್ಷಗಳ ಅನುದಾನದ ಪೈಕಿ ರೂ. 1125.00 ಲಕ್ಷ (ರೂ. ಹನ್ನೊಂದು ಕೋಟಿ ಇಪ್ಪತ್ತೈದು ಲಕ್ಷಗಳು)ಗಳನ್ನು ಲಗತ್ತಿಸಿರುವ ಅನುಬಂಧದನ್ವಯ ಆಯಾ ಜಿಲ್ಲೆ ಮುಂದೆ ತೋರಿಸಿರುವ ಮೊತ್ತವನ್ನು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯತರ ಕಲ್ಯಾಣ ಇಲಾಖೆರವರಿಗೆ ಕೆಳಕಂಡ ನಿಬಂಧನೆಗೊಳಪಟ್ಟು ಮರು ಬಿಡುಗಡೆ ಮಾಡಲಾಗಿದೆ.